**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>**

**<u>ಸಿ.ಸಿ. ಸಂಖ್ಯೆಃ 490/2023</u>**

**<u>ಪಿರ್ಯಾದಿ</u>** : ರಾಜ್ಯ, ಪರವಾಗಿ ಕಳಸ ಪೊಲೀಸ್ ಠಾಣೆ,
ಕಳಸ ತಾಲ್ಲೂಕು.

**ವಿರುದ್ಧ**

**<u>ಆರೋಪಿ</u>** : ಜೋಯಿ ಬಿನ್ ಲೂಕಸ್,
ವಯಸ್ಸು ಸುಮಾರು 52 ವರ್ಷ,
ವಾಸಃ ಮಹೇಂದ್ರ ಗೌಡರವರ ಕೂಲಿ
ಲೈನ್ ಮನೆ, ಮರಸಣಿಗೆ ಗ್ರಾಮ,
ಕಳಸ ಹೋಬಳಿ ಮತ್ತು ತಾಲ್ಲೂಕು.

**<u>ದೋಷಾರೋಪಣೆ</u>**

ಶ್ರೀ. ವಿಶ್ವನಾಥ್ ಎ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆಗಳು ಏನೆಂದರೆಃ–

1. ದಿನಾಂಕ 27.11.2022 ರಂದು ಸಂಜೆ 5–00 ಗಂಟೆ ಸಮಯದಲ್ಲಿ ಕಳಸ ಠಾಣಾ ವ್ಯಾಪ್ತಿಯ ಮರಸಣಿಗೆ ಗ್ರಾಮದ ಚಾಸಾ–8 ರವರಿಗೆ ಸೇರಿದ ಸರ್ವೆ ನಂ.230ರ ಜಾಗದಲ್ಲಿ ಆರೋಪಿಯಾದ ನೀವು ಚಾಸಾ–1 ರವರು ನೀರು ತುಂಬಿಸಿಕೊಳ್ಳುವ ವಿಚಾರದಲ್ಲಿ ಜಗಳ ತೆಗೆದು ಅವರಿಗೆ ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು **ಭಾರತ ದಂಡ ಸಂಹಿತೆ ಕಲಂ 504** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

2. ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಕಬ್ಬಿಣದ ಕತ್ತಿಯಿಂದ ಚಾಸಾ-1 ರವರ ಮುಖ ಮತ್ತು ತಲೆಯ ಭಾಗಕ್ಕೆ ಹೊಡೆದು ಅವರ ಮೂಗು ಮತ್ತು ತಲೆಗೆ ತೀವ್ರ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು **ಭಾರತ ದಂಡ ಸಂಹಿತೆ ಕಲಂ 326** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ.

ಪ್ರಃ 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

(ಆರೋಪಿಗೆ ದಿನಾಂಕ 03.07.2023 ರಂದು ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

**Sd/-**

ಕಳಸ
ದಿನಾಂಕಃ 03.07.2023

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.